<u>ದಿನಾಂಕ **12.12.2025** ರಂದು ಸಾಕ್ಷಿ ಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>

<u>ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರಿನ ದೃಢೀಕೃತ ಪ್ರತಿಯನ್ನು **ನಿಪಿ 2** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ನಕ್ಷೆಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ಐಎಮ್‌ವಿ ವರದಿಗಳ ದೃಢೀಕೃತ ಪ್ರತಿಗಳನ್ನು ಒಟ್ಟಾಗಿ **ನಿಪಿ 5** ಎಂದು, ಮೋಟಾರು ವಾಹನ ಕಾಯ್ದೆಯ ಕಲಂ 133 ರಡಿ ನೀಡಿರುವ ನೋಟೀಸು ಮತ್ತು ಸದರಿ ನೋಟೀಸಿಗೆ ನೀಡಿರುವ ಉತ್ತರದ ದೃಢೀಕೃತ ಪ್ರತಿಗಳನ್ನು ಕ್ರಮವಾಗಿ **ನಿಪಿ 6 ಮತ್ತು 7** ಎಂದು, ಶವ ತನಿಖಾ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 8** ಎಂದು, ಶವ ಪರೀಕ್ಷಾ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 9** ಎಂದು, ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು **ನಿಪಿ 10** ಎಂದು, ಡೆತ್ ಸಮರಿಯ ಧೃಡಿಕೃತ ಪ್ರತಿಯನ್ನು **ನಿಪಿ 11** ಎಂದು, ವೈದ್ಯಕೀಯ ಪ್ರಮಾಣ ಪತ್ರವನ್ನು **ನಿಪಿ 12** ಎಂದು, ಮರಣ ಪ್ರಮಾಣ ಪತ್ರವನ್ನು **ನಿಪಿ 13** ಎಂದು, ನೇಮಕಾತಿ ಆದೇಶವನ್ನು **ನಿಪಿ 14** ಎಂದು, ವೇತನ ಪಟ್ಟಿಗಳನ್ನು ಒಟ್ಟಾಗಿ **ನಿಪಿ 15** ಎಂದು, ಅಕೌಂಟ್ ಸ್ಟೇಟ್ ಮೆಂಟ್ ಅನ್ನು **ನಿಪಿ 16** ಎಂದು, ಪಡಿತರ ಚೀಟಿ, ಚುನಾವಣಾ ಗುರುತಿನ ಚೀಟಿ, ಪಾನ್ ಕಾರ್ಡುಗಳು ಮತ್ತು ಆಧಾರ್ ಕಾರ್ಡುಗಳ ನೋಟರಿ

ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಗಳನ್ನು ಕ್ರಮವಾಗಿ **ನಿಪಿ 17 ರಿಂದ 20** ಎಂದು ಗುರುತಿಸಲಾಯಿತು.

2ನೇ ಎದುರುದಾರರ ಪರ ಮಾನ್ಯ ವಕೀಲರು ಪ್ರತಿವಾದ ಪತ್ರ ಸಲ್ಲಿಸದಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ಎದುರುದಾರರ ಪರ ಮಾನ್ಯ ವಕೀಲರು ಗೈರು ಹಾಜರಿದ್ದು ಪಾಟೀ ಸವಾಲನ್ನು ಮುಂದೂಡಲಾಯಿತು .

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**